# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 279
2. ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
3. ಉತ್ತರಿಸಬೇಕಾದ ದಿನಾಂಕ : 06.07.2023
4. ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯರೂಪಕ್ಕೆ ತರಲು ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರವಾದ ಮಾಹಿತಿಯನ್ನು ನೀಡುವುದು) | • ಮೇಕೆದಾಟು ಸಮತೋಲನಾ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ರೂ.9000.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಯನ್ನು ದಿನಾಂಕ:18.01.2019 ರಂದು ಕೇಂದ್ರ ಜಲ ಆಯೋಗಕ್ಕೆ ಅನುಮೋದನೆಗೆ ಸಲ್ಲಿಸಲಾಗಿದೆ.<br>• ಯೋಜನೆಗೆ ಅವಶ್ಯವಿರುವ Environmental Impact Assessment & Environmental Management Plan ವರದಿಗಳನ್ನು ತಯಾರಿಸಲು Terms of Reference ಅರ್ಜಿಯನ್ನು ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆಯ ಸಚಿವಾಲಯಕ್ಕೆ (MoEF & CC) ಈ ಹಿಂದೆ ಸಲ್ಲಿಸಲಾದ ಅರ್ಜಿಯು Delist ಮಾಡಲಾಗಿರುವ ಹಿನ್ನೆಲೆಯಲ್ಲಿ ಅರ್ಜಿಯನ್ನು ಮರುಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ.<br>• ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯಗಳಿಂದ ಅಗತ್ಯ ಅನುಮೋದನೆ ಮತ್ತು ಕೇಂದ್ರ ಪರಿಸರ ಹಾಗೂ ಅರಣ್ಯ ಸಚಿವಾಲಯದ ಅನುಮತಿಗಾಗಿ ಕೇಂದ್ರ ಸರ್ಕಾರವನ್ನು ಕೋರಲಾಗುತ್ತಿದೆ.<br>• ದಿ:29.06.2023ರಂದು ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿ ಮಾಡಿ ಯೋಜನೆಯ ಅನುಷ್ಠಾನಕ್ಕಾಗಿ ತೀರುವಳಿಯನ್ನು ನೀಡುವಂತೆ ಕೋರಲಾಗಿದೆ.<br>• ಸದರಿ ಯೋಜನೆಗೆ ಇರುವ ಕಾನೂನಾತ್ಮಕ ಹಾಗೂ ಆಡಳಿತಾತ್ಮಕ ತೊಡಕುಗಳನ್ನು ನಿವಾರಿಸಿಕೊಂಡು ಸಕ್ಷಮ ಪ್ರಾಧಿಕಾರಗಳ ತೀರುವಳಿಗಳೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮಗಳನ್ನು ವಹಿಸಲಾಗುತ್ತಿದೆ. |

<table>
<tr><th>ಕ್ರ.<br>ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>(ಆ)</td><td>ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಗಾಗಿ ಮೀಸಲಿಟ್ಟಿರುವ ಅನುದಾನವೆಷ್ಟು; ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಯ ಅನುಷ್ಠಾನಕ್ಕಾಗಿ ಖರ್ಚು ಮಾಡಿರುವ ಮೊತ್ತವೆಷ್ಟು?</td><td>• 2022-23ನೇ ಸಾಲಿನ ಆಯವ್ಯಯದಲ್ಲಿ ಮೇಕೆದಾಟು ಯೋಜನೆಗಾಗಿ ರೂ.1000.00 ಕೋಟಿ ಅನುದಾನವನ್ನು ಮೀಸಲಿಡಲಾಗಿತ್ತು ಆದರೇ ಯಾವುದೇ ವೆಚ್ಚವಾಗಿರುವುದಿಲ್ಲ<br>• ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಯ ವಿಸ್ತೃತ ಯೋಜನಾ ವರದಿ ತಯಾರಿಕೆ ಹಾಗೂ ಇನ್ನಿತರ ಕಾರ್ಯಗಳಿಗೆ ರೂ.2.40 ಕೋಟಿ ವೆಚ್ಚ ಮಾಡಲಾಗಿದ್ದು, ವಿವರ ಕೆಳಕಂಡಂತಿದೆ.
<table>
<tr><th>ವರ್ಷ</th><th>ನೀಡಲಾದ ಅನುದಾನ (ರೂ. ಕೋಟಿ)</th><th>ವೆಚ್ಚ (ರೂ. ಕೋಟಿ)</th></tr>
<tr><td>2020-21</td><td>0.92</td><td>0.52</td></tr>
<tr><td>2021-22</td><td>4.42</td><td>1.88</td></tr>
<tr><td>2022-23</td><td>5.36</td><td>-</td></tr>
<tr><td>ಒಟ್ಟು</td><td>10.70</td><td>2.40</td></tr>
</table></td></tr>
</table>

***ಸಂಖ್ಯೆ: ಜಸಂಇ 41 ಎನ್‌ಎಲ್‌ಎ 2023***

**( ಡಿ. ಕೆ. ಶಿವಕುಮಾರ್ )**
**ಉಪ ಮುಖ್ಯಮಂತ್ರಿಗಳು**